ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂ. DTE-ADMI0ACM2/96/2021

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ:31-08-2021.

-:: ಸು ತ್ತೋಲೆ ::-

ವಿಷಯ: 2021-22ನೇ ಸಾಲಿನಲ್ಲಿ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಪ್ರವೇಶ ಸಂಬಂಧ - ಮೊದಲು ಬಂದವರಿಗೆ ಮೊದಲ ಆದ್ಯತೆ ಮೇಲೆ ಪ್ರವೇಶಾತಿ ಆಧಾರದ 62 ಸರ್ಕಾರಿ ಹಾಗೂ 34 ಅನುದಾನಿತ ಪಾಲಿಟೆಕ್ನಿಕ್‌ಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ಈ ಕಛೇರಿ ಪ್ರವೇಶಾಧಿಸೂಚನೆ ಪತ್ರ ಸಂ.DTE-ADMI0ACM2/96/2021, ದಿ:11-08-2021.

-oooooo-

ಉಲ್ಲೇಖಿತ ಪ್ರವೇಶಾಧಿಸೂಚನೆಯಲ್ಲಿ ನಮೂದಿಸಿರುವಂತೆ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇಲೆ ಪ್ರವೇಶಾತಿ ವಿಧಾನವನ್ನು ಅಳವಡಿಸಿರುವ 62 ಸರ್ಕಾರಿ ಹಾಗೂ 34 ಅನುದಾನಿತ ಪಾಲಿಟೆಕ್ನಿಕ್‌ಗಳಲ್ಲಿನ (ಅನುದಾನಿತ ಕೋರ್ಸುಗಳು) ಪೂರ್ಣಾವಧಿಯ ಇಂಜಿನಿಯರಿಂಗ್ ಮತ್ತು ನಾನ್-ಇಂಜಿನಿಯರಿಂಗ್ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಕೋರ್ಸುಗಳಿಗೆ 2021-22ನೇ ಶೈಕ್ಷಣಿಕ ಸಾಲಿನ ಪ್ರವೇಶಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಭರ್ತಿ ಮಾಡಿದ ಅರ್ಜಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಿ ಪ್ರವೇಶ ಪಡೆಯಲು ದಿನಾಂಕ:31-08-2021 ಕೊನೆಯ ದಿನಾಂಕವಾಗಿ ನಿಗಧಿಪಡಿಸಲಾಗಿತ್ತು.

**ಆದರೆ, ಪ್ರವೇಶ ಅವಧಿಯನ್ನು ವಿಸ್ತರಿಸಲು ಪಾಲಿಟೆಕ್ನಿಕ್‌ನ ಪ್ರಾಂಶುಪಾಲರುಗಳು ಕೋರಿರುವುದನ್ನು ಪರಿಗಣಿಸಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯ ಮೇರೆಗೆ ಪ್ರವೇಶಾವಧಿಯನ್ನು ಈ ಕೆಳಕಂಡಂತೆ ವಿಸ್ತರಿಸಿ ಅನುಮತಿ ನೀಡಲಾಗಿದೆ.**

| | |
|---|---|
| **ಅಭ್ಯರ್ಥಿಯು ಅರ್ಜಿಯನ್ನು ಸಂಸ್ಥೆಯಿಂದ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಪ್ರವೇಶ ಬಯಸುವ ಸಂಸ್ಥೆಯ ಪ್ರಾಂಶುಪಾಲರಿಗೆ ಸಲ್ಲಿಸಿ ಪ್ರವೇಶ ಪಡೆಯಲು ಕೊನೆಯ ದಿನಾಂಕ:** ವಿ.ಸೂ:- ಅರ್ಜಿ ಸ್ವೀಕೃತಿಗೆ ನಿಗಧಿಪಡಿಸಿರುವ ಕೊನೆಯ ದಿನಾಂಕಕ್ಕೂ ಮೊದಲೇ ಎಲ್ಲಾ ಸೀಟುಗಳು ಭರ್ತಿಯಾದಲ್ಲಿ ಆ ನಂತರ ಯಾವುದೇ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ. | **ಕೊನೆಯ ದಿನಾಂಕ** **20-09-2021ರ ಸಂಜೆ 5.30ರ ವರೆಗೆ** |

ಪ್ರಾಂಶುಪಾಲರು ಕೂಡಲೇ ಈ ಬಗ್ಗೆ ಕ್ರಮ ತೆಗೆದುಕೊಂಡು ಸ್ಥಳೀಯವಾಗಿ ಪತ್ರಿಕಾ ಪ್ರಕಟಣೆಯನ್ನು ನೀಡುವುದು. ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ಗಳ ಕೋರ್ಸುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದಿರುವ ಸೀಟುಗಳನ್ನು ಸಂಸ್ಥೆಯ ಸೂಚನಾಫಲಕದಲ್ಲಿ ಪ್ರಕಟಿಸಿ ವಿದ್ಯಾರ್ಥಿ/ಪೋಷಕರುಗಳ ಗಮನಕ್ಕೆ ತರಲು ಸೂಚಿಸಿದೆ. ಪ್ರಯುಕ್ತ, ಇದನ್ನು ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರು ಗಮನದಲ್ಲಿರಿಸಿಕೊಂಡು ನಿಯಮಗಳ ಪ್ರಕಾರ ಪ್ರವೇಶವನ್ನು ಪೂರೈಸುವಲ್ಲಿ ಕ್ರಮ ತೆಗೆದುಕೊಳ್ಳಬೇಕೆಂದು ತಿಳಿಸಲಾಗಿದೆ. ***ಕೋವಿಡ್-19 ಹಿನ್ನೆಲೆಯಲ್ಲಿ ಸರ್ಕಾರವು ಆಗಿಂದಾಗ್ಗೆ ಹೊರಡಿಸುವ ಮಾರ್ಗಸೂಚಿಗಳನ್ನು ಹಾಗೂ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.***

**ಆಯುಕ್ತರು**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ಬೆಂಗಳೂರು**

*ರಾಜ್ಯದ ಸರ್ಕಾರಿ / ಅನುದಾನಿತ - ಪಾಲಿಟೆಕ್ನಿಕ್‌ಗಳ ಪ್ರಿನ್ಸಿಪಾಲರಿಗೆ ಸೂಕ್ತ ಮಾಹಿತಿಗಾಗಿ ಹಾಗೂ ಅನುಸರಣೆಗಾಗಿ*

ಸದರಿ ಸುತ್ತೋಲೆಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಿ ನಿಯಮಗಳ ಪ್ರಕಾರ ತಮ್ಮ ಹಂತದಲ್ಲಿಯೇ ದಿ:20-09-2021ರ ಒಳಗೆ ಪ್ರವೇಶ ಪ್ರಕ್ರಿಯೆಯನ್ನು ಪೂರ್ಣಗೊಳಿಸತಕ್ಕದ್ದು.

Scanned with CamScanner